ಮಾಧ್ಯಮ ಮಾಹಿತಿ:

ರೂಪಾಂತರ ಕೊರೋನಾ ಹರಡದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸೂಚನೆ: ಆಡಳಿತಗಾರರು ಶ್ರೀ ಗೌರವ್ ಗುಪ್ತಾ.

ನಗರದಲ್ಲಿ ರೂಪಾಂತರ ಕೊರೋನಾ ಸೋಂಕು ಕಂಡುಬಂದಿದೆ. ಈ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಸೋಂಕು ಹೆಚ್ಚು ಪ್ರಮಾಣದಲ್ಲಿ ಹರಡದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಡಳಿತಗಾರರು ಗೌರವ್ ಗುಪ್ತಾ ರವರು ಎಲ್ಲಾ ವಲಯ ಜಂಟಿ ಆಯುಕ್ತರಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ರೂಪಾಂತರ ಕೊರೋನಾ ಬಂದಿರುವುದು ದೃಢಪಟ್ಟಿರುವ ಹಿನ್ನೆಲೆ ಇಂದು ಪಾಲಿಕೆ ಕೇಂದ್ರ ಕಛೇರಿ ಸಭಾಂಗಣ-01ರಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಸಭೆ ನಡೆಸಿದರು.

ನಗರದಲ್ಲಿ ರೂಪಾಂತರ ಕೊರೋನಾ ಯಾವ ವಲಯದಲ್ಲಿ ಎಷ್ಟು ಪ್ರಕರಣಗಳು ಕಂಡುಬಂದಿವೆ ಎಂದು ಮಾಹಿತಿ ಪಡೆದ ಆಡಳಿತಗಾರರು, ಸರ್ಕಾರದ ಎಸ್.ಒ.ಪಿ ಪ್ರಕಾರ ನಿಯಮಗಳನ್ನು ಪಾಲನೆ ಮಾಡಿ ಸರಿಯಾಗಿ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದಲ್ಲಿ ನಿನ್ನೆ 17 ಪ್ರಕರಣ ಹಾಗೂ ಇಂದು 1 ಸೇರಿ 18 ಮಂದಿಗೆ ಸೋಂಕು ದೃಢಪಟ್ಟಿದ್ದು, 54 ಪ್ರಾಥಮಿಕ ಸಂಪರ್ಕಿತರು ಹಾಗೂ 92 ದ್ವಿತೀಯ ಸಂಪರ್ಕಿತರು ಪತ್ತೆಯಾಗಿದ್ದಾರೆ. ಸೋಂಕು ದೃಢಪಟ್ಟವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಪ್ರಾಥಮಿಕ/ದ್ವಿತೀಯ ಸಂಪರ್ಕಿತರನ್ನು ಪಾಲಿಕೆ ವತಿಯಿಂದ ಗುರುತಿಸಿರುವ  ಹೋಟೆಲ್/ರೆಸಿಡೆನ್ಸಿಗಳಲ್ಲಿ ಸಾಂಸ್ಥಿಕ ಗೃಹದಿಗ್ಬಂಧನದಲ್ಲಿರಿಸಲಾಗಿದೆ. ಬೊಮ್ಮನಹಳ್ಳಿ ವಲಯದ ಅಪಾರ್ಟ್ ಮೆಂಟ್ ನಲ್ಲಿ ಇಬ್ಬರಿಗೆ ಸೋಂಕು ದೃಢಪಟ್ಟಿದ್ದು, ಅಪಾರ್ಟ್ ಮೆಂಟ್ ನಲ್ಲಿಯೇ 33 ಮಂದಿಯನ್ನು ಸಾಂಸ್ಥಿಕ ಗೃಹದಿಗ್ಬಂಧನದಲ್ಲಿರಿಸಲಾಗಿದೆ.

ರೂಪಾಂತರ ಕೊರೋನಾ ಅತ್ಯಂತ ವೇಗವಾಗಿ ಹರಡುವ ಸೋಂಕಾಗಿದ್ದು, ಹೆಚ್ಚು ಮಂದಿಗೆ ಸೋಂಕು ತಗಲುವ ಸಾಧ್ಯತೆ ಇದೆ. ಈ ಸಂಬಂಧ ಯಾರು ಅವರ ಸಂಪರ್ಕದಲ್ಲಿದ್ದರು ಎಂಬುದನ್ನು ತ್ವರಿತವಾಗಿ ಪತ್ತೆ ಮಾಡಿ ಕೂಡಲೆ ಪರೀಕ್ಷೆಗೊಳಪಡಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಜನರು ಆತಂಕಕ್ಕೊಳಗಾಗುವುದನ್ನು ಕಡಿಮೆ ಮಾಡಿ:

ರೂಪಾಂತರ ಕೊರೋನಾದಿಂದ ಜನರು ಹೆಚ್ಚು ಭಯಭೀತರಾಗಿದ್ದಾರೆ. ರೂಪಾಂತರ ಕೊರೋನಾ ತ್ವರಿತವಾಗಿ ಹರಡಲಿದೆ. ಆದರೆ ಯಾವುದೇ ಅಪಾಯವಿಲ್ಲ. ಆದ್ದರಿಂದ ಯಾರೊಬ್ಬರೂ ಭಯಪಡುವ ಅಗತ್ಯವಿಲ್ಲ. ಎಲ್ಲರೂ ಸರಿಯಾಗಿ ಮಾಸ್ಕ್ ಧರಿಸುವುದು, ಕೈಗಳಿಗೆ ಆಗಿಂದಾಗ್ಗೆ ಸ್ಯಾನಿಟೈಸರ್ ಹಾಕುವುದು ಹಾಗೂ ಕೈಗಳನ್ನು ತೊಳೆಯುವುದು ಮಾಡಬೇಕು. ನಾಗರಿಕರು ಆತಂಕಕ್ಕೊಳಗುವುದನ್ನು ಕಡಿಮೆ ಮಾಡುವ ಸಂಬಂಧ ಹೆಚ್ಚು ಅರಿವು ಮೂಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲು ಎಲ್ಲಾ ವಲಯ ಆರೋಗ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಆರೋಗ್ಯ ವಿಭಾಗದ ವಿಶೇ ಆಯುಕ್ತರು ರಾಜೇಂದ್ರ ಚೋಳನ್, ಎಲ್ಲಾ ವಲಯ ಜಂಟಿ ಆಯುಕ್ತರುಗಳಾದ ಪಲ್ಲವಿ, ಅಶೋಕ್, ವೀರಭದ್ರ ಸ್ವಾಮಿ, ರಾಮಕೃಷ್ಣ, ಶಿವಸ್ವಾಮಿ, ವೆಂಕಟಾಚಲಪತಿ, ನರಸಿಂಹಮೂರ್ತಿ, ಮುಖ್ಯ ಆರೋಗ್ಯಾಧಿಕಾರಿ(ಆರೋಗ್ಯ) ಡಾ. ವಿಜೇಂದ್ರ, ಎಲ್ಲಾ ವಲಯ ಆರೋಗ್ಯಾಧಿಕಾರಿಗಳು ಹಾಗೂ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಸಭೆ ನಡೆಸಿದರು.